# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | **1134** |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 15.12.2023 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಲೆಮಾರಿ ಮತ್ತು ಅರೆಅಲೆಮಾರಿ ಸಮುದಾಯಗಳ ಏಳಿಗೆಗಾಗಿ ಸ್ಥಾಪಿತವಾಗಿರುವ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮ ಮತ್ತು ಅಲೆಮಾರಿ ಕೋಶಕ್ಕೆ ಸರ್ಕಾರವು ಪ್ರಸ್ತುತ ಎಷ್ಟು ಅನುದಾನವನ್ನು ಮೀಸಲಿಟ್ಟಿದೆ. ಈ ಮೀಸಲಿಟ್ಟಿರುವ ಅನುದಾನವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? | 2023-24ನೇ ಸಾಲಿನ ಆಯವ್ಯಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿನ ಅಲೆಮಾರಿ/ಅರೆ ಅಲೆಮಾರಿ ಕೋಶಕ್ಕೆ ರೂ.23.65 ಕೋಟಿಗಳ ಅನುದಾನವನ್ನು ಹಾಗೂ ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ರೂ.12.00 ಕೋಟಿಗಳ ಅನುದಾನವನ್ನು ಒದಗಿಸಲಾಗಿರುತ್ತದೆ.<br><br>ಅಲೆಮಾರಿ/ಅರೆ ಅಲೆಮಾರಿ ಕೋಶ ಮತ್ತು ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ಹೆಚ್ಚುವರಿ ಅನುದಾನ ಒದಗಿಸುವಂತೆ ಆರ್ಥಿಕ ಇಲಾಖೆಯನ್ನು ಕೋರುವ ಬಗ್ಗೆ ಕ್ರಮವಹಿಸಲಾಗುವುದು. |
| ಆ) | ಅಲೆಮಾರಿ ಕೋಶ ಮತ್ತು ಕರ್ನಾಟಕ ಅಲೆಮಾರಿ/ಅರೆಅಲೆಮಾರಿ ಅಭಿವೃದ್ಧಿ ನಿಗಮಗಳನ್ನು ಸಮನ್ವಯಗೊಳಿಸಿ ಅಲೆಮಾರಿ ಜನಾಂಗದ ಅಭಿವೃದ್ಧಿಗೆ ಕೇಂದ್ರ ಸರ್ಕಾರದಲ್ಲಿರುವ ಯೋಜನೆಗಳನ್ನು ಬಳಸಿಕೊಂಡು ಆರ್ಥಿಕ ನೆರವನ್ನು ಪಡೆಯಲು ಅನುಕೂಲವಾಗುವಂತೆ ಭಾರತ ಸರ್ಕಾರದ ಮಾದರಿಯಲ್ಲಿ ನಿಗಮವನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಲೆಮಾರಿ/ಅರೆ ಅಲೆಮಾರಿ ಕೋಶದಿಂದ ಅಲೆಮಾರಿ/ ಅರೆ ಅಲೆಮಾರಿ ಸಮುದಾಯದ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಶೈಕ್ಷಣಿಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>1. ಆಶ್ರಮ ಶಾಲೆಗಳ ನಿರ್ವಹಣೆ.<br>2. ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ.<br>3. ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗಾಗಿ ಮನೆ ನಿರ್ಮಾಣ ಯೋಜನೆ.<br><br>ಇದೇ ರೀತಿ ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮ ದಿಂದ ಅಲೆಮಾರಿ/ಅರೆ ಅಲೆಮಾರಿ ಸಮುದಾಯದವರಿಗೆ ಈ ಕೆಳಕಂಡ ಆರ್ಥಿಕಾಭಿವೃದ್ಧಿ/ಶೈಕ್ಷಣಿಕ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸ ಲಾಗುತ್ತಿದೆ.<br><br>1. ಸ್ವಯಂ ಉದ್ಯೋಗ ಸಾಲ ಯೋಜನೆ.<br>2. ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ.<br>3. ಅರಿವು ಶೈಕ್ಷಣಿಕ ಸಾಲ ಯೋಜನೆ .<br>4. ಗಂಗಾಕಲ್ಯಾಣ ನೀರಾವರಿ ಯೋಜನೆ. |

| | | |
|---|---|---|
| | | 5. ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಬಡ್ಡಿ ರಹಿತ ಸಾಲ ಯೋಜನೆ.<br>6. ಸ್ವಾವಲಂಭಿ ಸಾರಥಿ ಯೋಜನೆ<br><br>ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಕೋಶ ಮತ್ತು ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮಗಳನ್ನು ವಿಲೀನಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ:ಹಿಂವಕ 655 ಬಿಂಎಂಎಸ್ 2023

(**ಶಿವರಾಜ ಎಸ್. ತಂಗಡಗಿ**)
ಹಿಂದುಳಿದ ವರ್ಗಗಳ ಕಲ್ಯಾಣ
ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು